# ಕರ್ನಾಟಕ ವಿಧಾನ ಪರಿಷತ್ತು

1 ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 937
2 ಸದಸ್ಯರ ಹೆಸರು : ಡಾ॥ ಚಂದ್ರಶೇಖರ್ ಬಿ ಪಾಟೀಲ್
3 ಉತ್ತರಿಸುವ ದಿನಾಂಕ : 24.02.2022
4 ಉತ್ತರಿಸುವ ಸಚಿವರು : ಗೃಹ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಜನವರಿ–19,2022ರಂದು ಪ್ರಕಟವಾದ ಪಿ.ಎಸ್.ಐ ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಕಲ್ಯಾಣ ಕರ್ನಾಟಕ ಭಾಗದ ಅಭ್ಯರ್ಥಿಗಳಿಗೆ ಅನ್ಯಾಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿದೆ. |
| (ಆ) | ಬಂದಿದ್ದಲ್ಲಿ, ಸರ್ಕಾರವು ಆಯ್ಕೆ ಪಟ್ಟಿ ತಡೆ ಹಿಡಿಯಲು ಹಿಂದೇಟು ಹಾಕುತ್ತಿರುವುದು ನಿಜವೇ; | ಪೊಲೀಸ್ ಸಬ್–ಇನ್ಸ್‌ಪೆಕ್ಟರ್ (ಪಿಎಸ್ಐ–ಸಿವಿಲ್) 545 ಹುದ್ದೆಗಳ ನೇಮಕಾತಿಯಲ್ಲಿ ಯಾವುದೇ ಅಕ್ರಮ ನಡೆದಿರುವುದಿಲ್ಲ. ಬದಲಾಗಿ ಕಲ್ಯಾಣ–ಕರ್ನಾಟಕ ಪ್ರದೇಶದ ಕೆಲವು ಅಭ್ಯರ್ಥಿಗಳು ಹಾಗೂ ಇನ್ನಿತರರು ತಾತ್ಕಾಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಣೆ / ಮನವಿಗಳನ್ನು ಸಲ್ಲಿಸಿರುವುದರಿಂದ ಸದರಿ ಮನವಿ /ಆಕ್ಷೇಪಣೆಗಳನ್ನು ಪರಿಶೀಲಿಸಿ ಕ್ರಮ ಕೈಗೊಳ್ಳಲು ನೇಮಕಾತಿ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಲಾಗಿರುತ್ತದೆ. |
| (ಇ) | ಹೊಸದಾಗಿ ಆಯ್ಕೆ ಪಟ್ಟಿ ಪ್ರಕಟಿಸಲು ಸರ್ಕಾರ ಆಲೋಚಿಸಿದೆಯೇ? | ನೇಮಕಾತಿ ಪ್ರಕ್ರಿಯೆಯಲ್ಲಿ ಅಳವಡಿಕೊಳ್ಳಲಾಗಿರುವ ನಿಯಮಗಳನ್ನು ಪರಿಶೀಲಿಸುವ ಸಲುವಾಗಿ ಸರ್ಕಾರದ ಆದೇಶ ಸಂಖ್ಯೆ: ಒಇ 21 ಪಿಇಐ 2022, ದಿನಾಂಕ: 15.02.2022ರಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಸಮಿತಿಯನ್ನು ರಚಿಸಲಾಗಿರುತ್ತದೆ. ಈ ಸಮಿತಿಯು 545 ಪಿ.ಎಸ್.ಐ ಹುದ್ದೆಯ ನೇಮಕಾತಿಯ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಸಿಆಸು ಇಲಾಖೆಯು ಕಾಲಕಾಲಕ್ಕೆ ಹೊರಡಿಸಿರುವ ಸುತ್ತೋಲೆಗಳನ್ವಯ ಪರಿಶೀಲಿಸಿ ನೇಮಕಾತಿ ಪ್ರಕ್ರಿಯೆಯನ್ನು ನಡೆಸಲಾಗಿದೆಯೇ? ಎಂಬ ಬಗ್ಗೆ ವರದಿ ಸಲ್ಲಿಸಲು ಸೂಚಿಸಲಾಗಿದೆ. ವರದಿ ಸ್ವೀಕೃತವಾದ ನಂತರದಲ್ಲಿ ಪರಿಶೀಲಿಸಿ ಕ್ರಮಕೈಗೊಳ್ಳಲಾಗುವುದು. |

ಸಂಖ್ಯೆ: ಒಇ 31 ಪಿಇಐ 2022

(ಆರಗ ಜ್ಞಾನೇಂದ್ರ)
ಗೃಹ ಸಚಿವರು